ತಂತಿ ವಿಳಾಸ: ಯೂನಿರೆಜ್
ದೂರವಾಣಿ ಸಂಖ್ಯೆ: 2419677/2419361
ಫ್ಯಾಕ್ಸ್: 0821-2419363/2419301

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಸೌಧ
ಕ್ರಾಫರ್ಡ್‌ಭವನ, ಮೈಸೂರು

ಸಂಖ್ಯೆ:ಜಿಎಲ್13/08/2024–25

ದಿನಾಂಕ.20–01–2026

## ಸುತ್ತೋಲೆ

ವಿಷಯ: ದಿನಾಂಕ.23.01.2026ರಂದು **"ರಾಷ್ಟ್ರೀಯ ಮತದಾರರ ದಿನಾಚರಣೆ"**ಯನ್ನು ಆಚರಿಸುವ ಹಾಗೂ **"ಮತದಾರರ ಪ್ರತಿಜ್ಞಾ ವಿಧಿ"**ಯನ್ನು ಸ್ವೀಕರಿಸುವ ಬಗ್ಗೆ.

ಉಲ್ಲೇಖ: 1. ಸರ್ಕಾರದ ಅಧೀನ ಕಾರ್ಯದರ್ಶಿ, ಸಿಬ್ಬಂದಿ ಮತ್ತು ಆಡಳಿತ ಸುಧಾರಣ ಇಲಾಖೆ ಇವರ ಪತ್ರದ ಸಂಖ್ಯೆ:ಸಿ.ಆಸು.ಇ. 01 ಪಿಹೆಚ್‌ಎಲ್ 2026, ದಿನಾಂಕ 20.01.2026.

2. ಭಾರತ ಚುನಾವಣಾ ಆಯೋಗ ಇವರ ಪತ್ರ ಸಂಖ್ಯೆ:491/ SVEEP-I/NVD 2025 ದಿನಾಂಕ.15.01.2026.

****

ಮೈಸೂರು ವಿಶ್ವವಿದ್ಯಾನಿಲಯದ ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗದ ಅಧ್ಯಕ್ಷರು, ನಿರ್ದೇಶಕರು, ಪ್ರಾಂಶುಪಾಲರು, ಬಟವಾಡೆ ಅಧಿಕಾರಿಗಳು, ಅಧ್ಯಾಪಕರು, ಅಧ್ಯಾಪಕೇತರರು, ಸಂಶೋಧನಾ ವಿದ್ಯಾರ್ಥಿಗಳು ಮತ್ತು ವಿದ್ಯಾರ್ಥಿಗಳಿಗೆ ತಿಳಿಸುವುದೇನೆಂದರೆ, ಮೇಲಿನ ಉಲ್ಲೇಖದಲ್ಲಿನ ಸರ್ಕಾರದ ಪತ್ರದಲ್ಲಿ **"ರಾಷ್ಟ್ರೀಯ ಮತದಾರರ ದಿನಾಚರಣೆ"** ಯನ್ನು ದಿನಾಂಕ.**23.01.2026ರಂದು** ಆಚರಿಸುವಂತೆಯೂ, ಹಾಗೂ ಭಾರತ ಚುನಾವಣಾ ಆಯೋಗ ಇವರ ಉಲ್ಲೇಖ 02ರ ಪತ್ರದ ಅನ್ವಯ **"ಮತದಾರರ ಪ್ರತಿಜ್ಞಾ ವಿಧಿ"** ಬೋಧನೆಯನ್ನು ಹಮ್ಮಿಕೊಳ್ಳುವಂತೆ ಸೂಚಿಸಿರುತ್ತಾರೆ.

ಆದುದರಿಂದ ದಿನಾಂಕ.**23.01.2026ರಂದು "ರಾಷ್ಟ್ರೀಯ ಮತದಾರರ ದಿನಾಚರಣೆ"**ಯನ್ನು ಆಚರಿಸುವಂತೆ ಹಾಗೂ ಹಿಂಪುಟದಲ್ಲಿರುವ **"ಮತದಾರರ ಪ್ರತಿಜ್ಞಾ ವಿಧಿ"** ಬೋಧನೆಯನ್ನು ತಮ್ಮ ಕಛೇರಿಗಳಲ್ಲಿ ಸ್ವೀಕರಿಸಬೇಕೆಂದು ಹಾಗೂ ತಮ್ಮ ಸಾಮಾಜಿಕ ಜಾಲತಾಣದಲ್ಲಿ ಸಾಧ್ಯವಾದಲ್ಲಿ ಚಿತ್ರಗಳನ್ನು ಅಪ್‌ಲೋಡ್ ಮಾಡುವಂತೆ ತಿಳಿಸಲು ನಿರ್ದೇಶಿತಳಾಗಿದ್ದೇನೆ.

ಕುಲಸಚಿವರು 20/1/2026
ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು-570 005

ಗೆ,

1. ಎಲ್ಲಾ ಸ್ನಾತಕ/ಸ್ನಾತಕೋತ್ತರ ಅಧ್ಯಯನ ವಿಭಾಗಗಳ ಅಧ್ಯಕ್ಷರುಗಳು/ನಿರ್ದೇಶಕರು/ಸಂಯೋಜನಾಧಿಕಾರಿಗಳು ಮತ್ತು ಪ್ರಾಧ್ಯಾಪಕರು.
2. ಹಣಕಾಸು ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
3. ಕುಲಸಚಿವರು(ಪರೀಕ್ಷಾಂಗ), ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
4. ವಿಶ್ವವಿದ್ಯಾನಿಲಯದ ಅಧೀನಕ್ಕೊಳಪಟ್ಟ ಎಲ್ಲಾ ಕಾಲೇಜುಗಳ ಪ್ರಾಂಶುಪಾಲರುಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
5. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
6. ಆಡಳಿತಾಧಿಕಾರಿಗಳು, ಮಾನಸಗಂಗೋತ್ರಿ, ಮೈಸೂರು.
7. ಸಂಯೋಜಕರು, ಐ.ಡಿ.ಸಿ. ಗಣಕ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು–ಇವರಿಗೆ **ಸದರಿ ಸುತ್ತೋಲೆಯನ್ನು ಮೈಸೂರು ವಿಶ್ವವಿದ್ಯಾನಿಲಯದ ಅಂತರ್ಜಾಲದಲ್ಲಿ ಪ್ರಕಟಿಸುವುದು.**
8. ಎಲ್ಲಾ ಉಪ ಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
9. ಮಾನ್ಯ ಕುಲಪತಿಯವರ/ಕುಲಸಚಿವರು/ಕುಲಸಚಿವರು(ಪರೀಕ್ಷಾಂಗ)/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈ.ವಿ.ವಿ., ಮೈಸೂರು.
10. ಕಛೇರಿ ಪ್ರತಿ.

भारत निर्वाचन आयोग
Election Commission of India

ಒಳಗೊಳ್ಳುವ, ಸುಗಮ, ನೈತಿಕ
ಮತ್ತು ಭಾಗವಹಿಸುವ ಚುನಾವಣೆ

# ಮತದಾರರ ಪ್ರತಿಜ್ಞಾ ವಿಧಿ

ಪ್ರಜಾಪ್ರಭುತ್ವದಲ್ಲಿ ದೃಢ ವಿಶ್ವಾಸವುಳ್ಳ ಭಾರತದ ಪೌರರಾದ ನಾವು, ನಮ್ಮ ದೇಶದ ಪ್ರಜಾಸತ್ತಾತ್ಮಕ ಸಂಪ್ರದಾಯಗಳು ಮತ್ತು ಮುಕ್ತ, ನ್ಯಾಯಸಮ್ಮತ ಮತ್ತು ಶಾಂತಿಯುತ ಚುನಾವಣೆಗಳ ಘನತೆಯನ್ನು ಎತ್ತಿ ಹಿಡಿಯುತ್ತೇವೆಂದು ಮತ್ತು ಪ್ರತಿಯೊಂದು ಚುನಾವಣೆಯಲ್ಲಿ ನಿರ್ಭೀತರಾಗಿ ಮತ್ತು ಧರ್ಮ, ಜನಾಂಗ, ಜಾತಿ, ಮತ, ಭಾಷೆ ಅಥವಾ ಯಾವುದೇ ಪ್ರೇರೇಪಣೆಗಳ ದಾಕ್ಷಿಣ್ಯಗಳಿಂದ ಪ್ರಭಾವಿತರಾಗದೆ ಮತ ಚಲಾಯಿಸುತ್ತೇವೆಂದು ಈ ಮೂಲಕ ಪ್ರತಿಜ್ಞೆ ಸ್ವೀಕರಿಸುತ್ತೇವೆ.

ಮತದಾನಕ್ಕಿಂತ ಇನ್ನೊಂದಿಲ್ಲ
ಮತ
NVD 2025